ನಿ-330
ಕ್ರ-74
146ನೇ ಅಧಿವೇಶನ
ಕಲ್ಯಾಣ

**ಕರ್ನಾಟಕ ವಿಧಾನ ಪರಿಷತ್ತು**

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಲೀಂ ಅಹಮದ್ ರವರು ನಿಯಮ-330ರ ಅಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ.

ವಿಷಯ: ಹುಬ್ಬಳ್ಳಿ -ಧಾರವಾಡ ಬೈಪಾಸ್‌ನ ಹತ್ತು ಪಥಗಳ ನಿರ್ಮಾಣ ಕಾರ್ಯ ಪ್ರಾರಂಭವಾಗಿ ಹಲವು ವರ್ಷಗಳು ಕಳೆದಿದ್ದರೂ ಸಹಾ, ರಸ್ತೆ ನಿರ್ಮಾಣ ಪೂರ್ಣಗೊಂಡಿಲ್ಲ. ಈಗಾಗಲೇ ಸುಮಾರು ಸಾವಿರದ ಇನ್ನೂರಕ್ಕೂ ಹೆಚ್ಚು ಜೀವ ಹಾನಿಯಾಗಿದ್ದು, ಹತ್ತು ಸಾವಿರಕ್ಕೂ ಹೆಚ್ಚು ದನ-ಕರುಗಳು ಮರಣ ಹೊಂದಿರುವುದು ವರದಿಯಾಗಿದೆ. ಈ ಕಾಮಗಾರಿಗಳ ಅನುಷ್ಠಾನವು ವಿಳಂಬವಾಗುತ್ತಿರುವ ವಿಷಯವನ್ನು ಸಾರ್ವಜನಿಕವಾಗಿ ಮಹತ್ವದ ವಿಚಾರವಾಗಿರುವುದರಿಂದ ದಿನಾಂಕ: 06.03.2022 ರಂದು ಸದನದಲ್ಲಿ ನಿಯಮ 330 ಮೇರೆಗೆ ಪ್ರಸ್ತಾಪಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ) ಸದನದಲ್ಲಿ ಪ್ರಸ್ತಾಪಿಸಬಯಸುತ್ತೇನೆ.

********

**ಸರ್ಕಾರದ ಉತ್ತರ**

ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆ ರಾಷ್ಟ್ರೀಯ ಹೆದ್ದಾರಿ-4ರ (ಹೊಸ ರಾಷ್ಟ್ರೀಯ ಹೆದ್ದಾರಿ-48) ಕಿ.ಮೀ.403. ರಾ.ಹೆ.4 ರ ಬೆಂಗಳೂರು-ಪೂನಾ ರಸ್ತೆಯ ಕಿ.ಮೀ.403.800 ರಿಂದ 433.280 ರವರೆಗಿನ ಸುಮಾರು 30.00 ಕಿ.ಮೀ. ಉದ್ದದ ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆಯನ್ನು 1998 ರಲ್ಲಿ ಮೆ॥ ಭಾರತ್ ಫೋರ್ಜ್ ಪ್ರೈವೇಟ್ ಲಿಮಿಟೆಡ್, ಪುಣೆ ರವರು ಮೆ॥ ನಂದಿ ಹೈವೇ ಡೆವಲಪರ್ಸ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ರವರಿಗೆ ಕಾಮಗಾರಿಯನ್ನು ನಿರ್ವಹಿಸಲು SPV ಆಗಿ ನೇಮಿಸಿರುತ್ತಾರೆ ಮತ್ತು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ, ನವದೆಹಲಿ ಮತ್ತು ರಾಜ್ಯ ಸರ್ಕಾರದ ನಡುವಿನ BOT ಆಧಾರದ ಕರಾರಿನಂತೆ ನಿರ್ಮಿಸಿ ನಿರ್ವಹಣೆ ಮಾಡುತ್ತಿದ್ದಾರೆ. ಈ ಕರಾರು ದಿನಾಂಕ: 05.05.2024 ರವರೆಗೆ ಚಾಲ್ತಿಯಲ್ಲಿದೆ. ಆದಾಗ್ಯೂ ಸದರಿ ರಸ್ತೆಯಲ್ಲಿ ಸಂಭವಿಸುತ್ತಿರುವ ಅಪಘಾತಗಳಿಂದಾಗಿ ಮಾನ್ಯ ಡೈರೆಕ್ಟರ್ ಜನರಲ್, ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯ, ನವದೆಹಲಿ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 07.10.2021 ರಂದು ಜರುಗಿದ ಸಭೆಯಲ್ಲಿ ಸದರಿ ರಸ್ತೆಯನ್ನು ಷಟ್ಪಥ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಲು ಮೆ॥ ನಂದಿ ಹೈವೇ ಡೆವಲಪರ್ಸ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ರವರು ಒಪ್ಪಿಗೆ ಸೂಚಿಸಿರುತ್ತಾರೆ. ಸದರಿ ರಸ್ತೆಯನ್ನು ಆದ್ಯತೆ ಮೇಲೆ ಮೇಲ್ದರ್ಜೆಗೇರಿಸಲು ಕಾಮಗಾರಿಯನ್ನು ಶೀಘ್ರವಾಗಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI) ದ ವತಿಯಿಂದ ಕೈಗೆತ್ತಿಕೊಳ್ಳಲು ಮಾನ್ಯ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವರು ಸೂಚಿಸಿರುತ್ತಾರೆ. ಅದರಂತೆ ಸದರಿ ರಸ್ತೆಯನ್ನು 6 ಪಥದ ರಸ್ತೆಯನ್ನಾಗಿ ಮೇಲ್ದರ್ಜೆ ಮತ್ತು ಅಗಲೀಕರಣಗೊಳಿಸುವ ಕಾಮಗಾರಿಗೆ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI) ಪ್ರಧಾನ ಕಚೇರಿ, ನವದೆಹಲಿಯಿಂದ ದಿನಾಂಕ: 07.01.2022 ರಂದು ಟೆಂಡರ್ ಕರೆದಿರುವುದಾಗಿ NHAI ರವರು ವರದಿಸಿರುತ್ತಾರೆ ಹಾಗೂ ಟೆಂಡರ್ ಪ್ರಕ್ರಿಯೆ ದಿನಾಂಕ: 07.06.2022 ರವರೆಗೆ ನಡೆಯಲಿದ್ದು, ಅಕ್ಟೋಬರ್-2022ರ ಮಾಹೆಯಲ್ಲಿ ಕಾಮಗಾರಿಯನ್ನು ಪ್ರಾರಂಭಿಸುವ ಸಾಧ್ಯತೆ ಇರುವುದಾಗಿ ಮತ್ತು ನಿರ್ಮಾಣ ಅವಧಿ 30 ತಿಂಗಳುಗಳಾಗಿವೆ ಎಂದು NHAI ರವರು ವರದಿಸಿದ್ದಾರೆ.

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು

**ಸಂಖ್ಯೆ:** ಲೋಇ 243 ಸಿಎನ್‌ಹೆಚ್ 2022 (ಇ)